ಕರ್ನಾಟಕ ಸರ್ಕಾರದ ನಡವಳಿಗಳು

ಜಲ ಸಂಪನ್ಮೂಲ ಇಲಾಖೆ

ವಿಷಯ:- ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕಿನ ಬನ್ನಿಕೊಪ್ಪ ಗ್ರಾಮ ಪಂಚಾಯತಿ ವ್ಯಾಪ್ತಿಯ ಸುಗ್ನಳ್ಳಿ ಗ್ರಾಮದ ಆಲದಮ್ಮನ ಕೆರೆಗಳನ್ನು ತುಂಬಿಸುವ ಯೋಜನಾ ವರದಿಗೆ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:-1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ಆಲದಮ್ಮನ ಕೆರೆ/ಯೋಜನಾ ವರದಿ/2019/2433, ದಿನಾಂಕ: 06.08.2019.

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ಆಲದಮ್ಮನ ಕೆರೆ/ಯೋಜನಾ ವರದಿ/2019/2955, ದಿನಾಂಕ: 09.09.2019.

---***---

ಪ್ರಸ್ತಾವನೆ:

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಇವರು ಮೇಲೆ ಓದಲಾದ ಪತ್ರಗಳಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುತ್ತ, ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕಿನ ಬನ್ನಿಕೊಪ್ಪ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮಳೆ ಅಭಾವದಿಂದ ಯಾವುದೇ ಕೆರೆ ಭರ್ತಿಯಾಗದೇ, ಕೊಳವೆ ಬಾವಿಗಳಲ್ಲಿನ ಅಂತರ್ಜಲ ಮಟ್ಟ ಸಂಪೂರ್ಣ ಕುಸಿದಿದ್ದು, ಸಾರ್ವಜನಿಕರಿಗೆ ಹಾಗೂ ಜನ ಜಾನುವಾರುಗಳಿಗೆ ತೀವ್ರ ಕುಡಿಯುವ ನೀರಿನ ಸಂಕಷ್ಟಕ್ಕೆ ಒಳಗಾಗಿರುತ್ತಾರೆ ಎಂದು ತಿಳಿಸಿರುತ್ತಾರೆ.

ಮುಂದುವರೆದು, ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕಿನ ಸುಗ್ನಳ್ಳಿ ಗ್ರಾಮದ ಆಲದಮ್ಮನ ಕೆರೆ ಹಾಗೂ ಬನ್ನಿಕೊಪ್ಪ ಗ್ರಾಮದ ಎರಡು ಕೆರೆಗಳನ್ನು ತುಂಬಿಸಲು ಯೋಜಿಸಲಾಗಿದ್ದು ಅವುಗಳ ಸಾಮರ್ಥ್ಯ ಕ್ರಮವಾಗಿ 6.40ಎಂಸಿಎಫ್‌ಟಿ, 5.60ಎಂಸಿಎಫ್‌ಟಿ ಹಾಗೂ 4.20 ಎಂಸಿಎಫ್‌ಟಿ ಇದ್ದು, ಚಾಲ್ತಿಯಲ್ಲಿರುವ ನಿಯಮಗಳ ಪ್ರಕಾರ ಕೆರೆಗಳ ಸಾಮರ್ಥ್ಯದ ಶೇ.75 ರಷ್ಟು ಅಂದರೆ ಕ್ರಮವಾಗಿ 4.80 ಎಂಸಿಎಫ್‌ಟಿ, 4.20 ಎಂಸಿಎಫ್‌ಟಿ, ಹಾಗೂ 3.15 ಎಂಸಿಎಫ್‌ಟಿ, ಅಂದರೆ ಒಟ್ಟು 12.15 ಎಂಸಿಎಫ್‌ಟಿ ನೀರಿನ ಅವಶ್ಯಕತೆ ಇರುತ್ತದೆ. ಇದನ್ನು ತುಂಗಾಭದ್ರ ನದಿಯಿಂದ ಲಿಫ್ಟ್ ಮಾಡಿ rising main ಮುಖಾಂತರ ತುಂಬಿಸುವುದು ಹೆಚ್ಚಿನ ಆರ್ಥಿಕ ಹೊರೆಯಾಗುತ್ತಿದ್ದರಿಂದ, ಪ್ರಸ್ತುತ ಚಾಲ್ತಿಯಲ್ಲಿರುವ ಶಿರಹಟ್ಟಿ ತಾಲ್ಲೂಕಿನ ಇಟಗಿ ಗ್ರಾಮದ ಬಳಿ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ಶಿರಹಟ್ಟಿ ತಾಲ್ಲೂಕಿನ 20 ಕೆರೆಗಳು ಹಾಗೂ 15 ಚೆಕ್ ಡ್ಯಾಂ ಗಳನ್ನು ತುಂಬಿಸುವ ಮೂಲ ಯೋಜನೆಗೆ ಧಕ್ಕೆಯಾಗದಂತೆ, delivery chamber - 3/J-3A ಹತ್ತಿರ rising main tap ಮಾಡಿ peak ground level ಹತ್ತಿರ delivery chamber ನಿರ್ಮಾಣ ಮಾಡಿ, 0.92 ಕಿ.ಮೀ rising main (MS pipe 0.20m dia) ಮುಖಾಂತರ ನೀರನ್ನೆತ್ತಿ gravity flow ಮುಖಾಂತರ ಯೋಜನಾ ಕಾಮಗಾರಿಗಳನ್ನೊಳಗೊಂಡಂತೆ 90 ದಿನಗಳ ಬದಲಾಗಿ 95 ದಿನಗಳ ಕಾಲ ನೀರನ್ನೆತ್ತಿ, ಹೆಚ್ಚುವರಿಯಾಗಿ 12.15 ಎಂಸಿಎಫ್‌ಟಿ ಪ್ರಮಾಣದ ನೀರನ್ನು ಸುಗ್ನಳ್ಳಿ ಗ್ರಾಮದ ಆಲದಮ್ಮನ ಕೆರೆ ಹಾಗೂ ಬನ್ನಿಕೊಪ್ಪ ಗ್ರಾಮದ ಎರಡು ಕೆರೆಗಳಿಗೆ ತುಂಬಿಸಲು ಯೋಜಿಸಲಾಗಿದೆ, ಎಂದು ವ್ಯ.ನಿ., ಕ.ನೀ.ನಿ.ನಿ ರವರು ತಿಳಿಸಿರುತ್ತಾರೆ.

...2

Scanned by CamScanner

ಈ ಕುರಿತಂತೆ ಸದರಿ ಯೋಜನೆಗೆ, ದಿನಾಂಕ:20.06.2019 ರಂದು ಜರುಗಿದ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 57ನೇ ಸಭೆಯಲ್ಲಿ ರೂ.10.00 ಕೋಟಿ ವೆಚ್ಚದ ವಿವರವಾದ ಯೋಜನಾ ವರದಿಯನ್ನು ಮಂಡಿಸಲಾಗಿದ್ದು, ಸದರಿ ಸಮಿತಿಯು, ಈ ಯೋಜನೆಗೆ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು, ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ಮಾಡಿರುತ್ತದೆ. ಅಂದಾಜು ಪರಿಶೀಲನಾ ಸಮಿತಿಯ ಶಿಫಾರಸ್ಸಿನಂತೆ ದಿನಾಂಕ:09.07.2019 ರಂದು ಜರುಗಿದ ನಿರ್ದೇಶಕರ ಮಂಡಳಿಯ 88ನೇ ಸಭೆಯಲ್ಲಿ, ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿರುತ್ತದೆ.

ಅದರಂತೆ, ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕಿನ ಸುಗ್ನಳ್ಳಿ ಗ್ರಾಮದ ಆಲದಮ್ಮನ ಕೆರೆ ಹಾಗೂ ಬನ್ನಿಕೊಪ್ಪ ಗ್ರಾಮದ ಎರಡು ಕೆರೆಗಳನ್ನು ತುಂಗಭದ್ರಾ ನದಿಯಿಂದ ತುಂಬಿಸುವ ರೂ.10.00 ಕೋಟಿಗಳ ವೆಚ್ಚದ ಯೋಜನೆಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ., ರವರು ಕೋರಿರುತ್ತಾರೆ.

2019-20ನೇ ಸಾಲಿನ ಆಯವ್ಯಯದಲ್ಲಿ ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕು ವ್ಯಾಪ್ತಿಯ ಸುಗ್ನಳ್ಳಿ ಗ್ರಾಮದ ಸರ್ವೆ ನಂ.41 ರಲ್ಲಿರುವ ಆಲದಮ್ಮನ ಕೆರೆಯನ್ನು ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ ರೂ.10.00 ಕೋಟಿ ಮೊತ್ತದ ಯೋಜನೆಯನ್ನು ಘೋಷಿಸಲಾಗಿದೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 24 ಎಂಟಿಪಿ 2019 ಬೆಂಗಳೂರು,**
**ದಿನಾಂಕ: 31.10.2019**

ಗದಗ ಜಿಲ್ಲೆ ಶಿರಹಟ್ಟಿ ತಾಲ್ಲೂಕಿನ ಸುಗ್ನಳ್ಳಿ ಗ್ರಾಮದ ಆಲದಮ್ಮನ ಕೆರೆ ಹಾಗೂ ಬನ್ನಿಕೊಪ್ಪ ಗ್ರಾಮದ ಕೆರೆಗಳನ್ನು ತುಂಗಭದ್ರಾ ನದಿಯಿಂದ ನೇರನ್ನೆತ್ತಿ ತುಂಬಿಸುವ ರೂ.10.00 ಕೋಟಿಗಳ ಯೋಜನೆಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 04 ಟಿಎಫ್‌ಪಿ 2015,ದಿನಾಂಕ: 09.10.2015 ಮತ್ತು ಈ ಆದೇಶದ Corrigendum ದಿನಾಂಕ:02.01.2016ರಲ್ಲಿ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

31/10/19

(ಶ್ರೀಧರ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1).
ಜಲ ಸಂಪನ್ಮೂಲ ಇಲಾಖೆ

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು 01.
4. ಮಾನ್ಯ ಮುಖ್ಯ ಮಂತ್ರಿಗಳ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಕಾಫಿಬೋರ್ಡ್ ಕಟ್ಟಡ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ನೀರಾವರಿ ಕೇಂದ್ರ ವಲಯ, ಮುನಿರಾಬಾದ್, ಕೊಪ್ಪಳ
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned by CamScanner